ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಮೇಲೆ ತಿಳಿಸಿದ ಯೋಜನೆಗಳನ್ನು ಕಾರ್ಯಗತಗೊಳಿಸಲು 1885ರ ಭಾರತೀಯ ಟೆಲಿಗ್ರಾಪ್ ಭಾಗ– III (ಕೇಂದ್ರಿಯ ಕಾಯ್ದೆ 1885ರ 13 ಅನ್ವಯ) ಅಧಿನಿಯಮ, ಟೆಲಿಗ್ರಾಫ್ ಹೊಂದಿರುವ ಎಲ್ಲಾ ಅಧಿಕಾರಗಳನ್ನು ಹೊಂದಿರುತ್ತದೆ ಹಾಗೂ ಚಲಾಯಿಸುತ್ತದೆ. ಸದರಿ ಯೋಜನೆಗಳಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ನಿಗಮದ ಪರಿಗಣನೆಗಾಗಿ ಆಕ್ಷೇಪಣೆಗಳನ್ನು ಈ ಪ್ರಕಟಣೆ ಪ್ರಕಟವಾದ 30 ದಿನಗಳ ಒಳಗಾಗಿ ಕಾರ್ಯನಿರ್ವಾಹಕ ಅಭಿಯಂತರರು (ವಿ), ಬೃಹತ್ ಕಾಮಗಾರಿ ವಿಭಾಗ, ಕವಿಪ್ರನಿನಿ, ಆರ್.ಹೆಚ್. ಬಿಲ್ಡಿಂಗ್, ಎರಡನೇ ಮಹಡಿ, ಪಿಬಿ ರಸ್ತೆ, ದಾವಣಗೆರೆ–2 ಇವರಿಗೆ ಕಳುಹಿಸುವುದು.

ಕಾರ್ಯನಿರ್ವಾಹಕ ಅಭಿಯಂತರರು (ವಿ),
ಬೃಹತ್ ಕಾಮಗಾರಿ ವಿಭಾಗ, ಕ.ವಿ.ಪ್ರ.ನಿ.ನಿ.
ದಾವಣಗೆರೆ.

ಪಿಡಿ.82

ADVERTISMENT OF NOTICE OF RESOLUTION OF VOLUNTARY WINDING UP FOR PUBLICATION IN THE OFFICIAL GAZETTE/ NEWS PAPER UNDER SECTION 485(1)

In matter of companies Act, 1956

AND

MURUGAN OIL EXTRACTIONS PVT.LTD., Registered on 22nd August, 1985

At the Extraordinary general meeting of the above company held at No.4, 2nd Floor, 3rd Main Road,Sheshadripuram, Bangalore-560020. On 26th November 2009 the following resolution was passed:

RESOLUTION (Special)

“RESOLVED that, in view of the satisfaction of this meeting that the company cannot, by reason of the liabilities, continue its business, the company be and hereby wound voluntarily by creditors under section 500 of the companies Act, 1956.”

Place: Bangalore
Date:08.12.2009
PD-83

For Murugan Oil Extractions Pvt.Ltd.,
CHAIRMAN/ LIQUIDATOR.

ಭೂ ದಾಖಲೆಗಳ ಜಂಟಿ ನಿರ್ದೇಶಕರು, ಮರುಭೂಮಾಪನ, ಬೆಳಗಾವಿ

ಅಧಿಸೂಚನೆ

ಸಂಖ್ಯೆ:ಮರುಭೂಪನ:ನೊ–6/08–09, ದಿನಾಂಕ:7ನೇ ಡಿಸೆಂಬರ್, 2009

ಕರ್ನಾಟಕ ಭೂಕಂದಾಯ ಅಧಿನಿಯಮ 1964ರ ಕಲಂ 106 ಹಾಗೂ ಘನ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಕಂ.ಇ/29/ಭೂದಾಸ/2009, ದಿನಾಂಕ:20.02.2009ರ ಮೇರೆಗೆ 109, 112 ಹಾಗೂ 152 ರಲ್ಲಿ ನಿಹಿತವಾದ ಅಧಿಕಾರದ ಮೇರೆಗೆ ಭೂದಾಖಲೆಗಳ ಜಂಟಿ ನಿರ್ದೇಶಕರು, ಮರು ಭೂಮಾಪನ, ಬೆಳಗಾವಿ, ಆದ ನಾನು ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲ್ಲೂಕಿನ ಈ ಕೆಳಕಂಡ ಗ್ರಾಮದಲ್ಲಿ ಮರು–ಭೂಮಾಪನ ಹಾಗೂ ಮರು–ಭೂವರ್ಗೀಕರಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ.

ಮೇಲ್ಕಂಡ ಯೋಜನೆಯಲ್ಲಿ ಬರತಕ್ಕ ಗ್ರಾಮಗಳ ಎಲ್ಲ ಹಿಡುವಳಿದಾರರು/ ಮಾಲೀಕರು ಅಳತೆಗೆ ಬರತಕ್ಕ ಮೋಜಣಿದಾರರಿಗೆ ಅಗತ್ಯ ಸಹಾಯ (ಕೂಲಿಗಳನ್ನು ಒದಗಿಸುವುದು ಇತ್ಯಾದಿ) ಗಳನ್ನು ಪೂರೈಸತಕ್ಕದ್ದು.

ಭೂದಾಖಲೆಗಳ ಜಂಟಿ, ನಿರ್ದೇಶಕರು,
ಮರುಭೂಮಾಪನ, ಬೆಳಗಾವಿ.

ಅ.ನಂ.	ತಾಲ್ಲೂಕು	ಗ್ರಾಮದ ಹೆಸರು
1	2	3
1.	ಬೆಳಗಾವಿ	ಚಂದನಹೊಸೂರು

ಷರಾ: ಭೂಮಾಪನ ತಂಡವು ಆಯಾ ಗ್ರಾಮಗಳಲ್ಲಿ ಬರತಕ್ಕ ಸರ್ಕಾರಿ ನಂಬರುಗಳನ್ನು ಅಳತೆ ಮಾಡಿ ಸುತ್ತೋಲೆಯಂತೆ ದಾಖಲೆಗಳನ್ನು ತಯಾರಿಸುವುದು.

ಭೂದಾಖಲೆಗಳ ಜಂಟಿ, ನಿರ್ದೇಶಕರು,
ಪಿಆರ್.1291 ಮರುಭೂಮಾಪನ, ಬೆಳಗಾವಿ.

ಶಿಕ್ಷಣ ಇಲಾಖೆ
ಅಧಿಸೂಚನೆ

ಸಂಖ್ಯೆ: ಇಡಿ 284 ಡಿಪಿಐ 2009(ii), ಬೆಂಗಳೂರು, ದಿನಾಂಕ:4ನೇ ಡಿಸೆಂಬರ್, 2009

ವಿಷಯ: ಸಾರ್ವಜನಿಕ ಶಿಕ್ಷಣ ಇಲಾಖೆಯ, ಗ್ರೂಪ್-'ಎ' ಹಿರಿಯ ಶ್ರೇಣಿ ವೃಂದದ (ವಿಶೇಷ ವರ್ಗ) ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:01.01.2008ರಲ್ಲಿದ್ದಂತೆ ಪ್ರಕಟಿಸುವ ಬಗ್ಗೆ- ಉಪ ನಿರ್ದೇಶಕರು, ದೈಹಿಕ ಶಿಕ್ಷಣ.

ಸಾರ್ವಜನಿಕ ಶಿಕ್ಷಣ ಇಲಾಖೆಯ, ಗ್ರೂಪ್-'ಎ' ಹಿರಿಯ ಶ್ರೇಣಿ ವೃಂದದ (ವಿಶೇಷವರ್ಗ) ಉಪ ನಿರ್ದೇಶಕರು, ದೈಹಿಕ ಶಿಕ್ಷಣ, ರವರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:01.01.2008ರಂದು ಇದ್ದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 125 ಡಿಪಿಐ 2008, ದಿನಾಂಕ:20.03.2008ರಂದು ಪ್ರಕಟಿಸಿ, ಈ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಭಾದಿತರಾದ ಅಧಿಕಾರಿಗಳು ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಒಂದು ತಿಂಗಳೊಳಗಾಗಿ ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸುವಂತೆ ತಿಳಿಸಲಾಗಿತ್ತು.

ಸದರಿ ಪಟ್ಟಿಯ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಂದ ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಬಂದಿರುವುದಿಲ್ಲ. ಸಾರ್ವಜನಿಕ ಶಿಕ್ಷಣ ಇಲಾಖೆಯ, ಗ್ರೂಪ್-'ಎ' ಹಿರಿಯ ಶ್ರೇಣಿ ವೃಂದದ (ವಿಶೇಷ ವರ್ಗ) ಉಪ ನಿರ್ದೇಶಕರು, ದೈಹಿಕ ಶಿಕ್ಷಣ ಅಧಿಕಾರಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ಅನುಬಂಧದಲ್ಲಿರುವಂತೆ ಪ್ರಕಟಿಸಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಎನ್. ಸೋಮಶೇಖರ್
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ, (ಆಡಳಿತ).

ಅನುಬಂಧ

(ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 284 ಡಿಪಿಐ 2009, ದಿನಾಂಕ:4ನೇ ಡಿಸೆಂಬರ್, 2009)

ಗ್ರೂಪ್-'ಎ' ಹಿರಿಯ ಶ್ರೇಣಿ ವೃಂದದ (ವಿಶೇಷ ವರ್ಗ) ಅಧಿಕಾರಿಗಳ ಅಂತಿಮ ಜೇಷ್ಠತಾ ಪಟ್ಟಿ

ದಿನಾಂಕ:01.01.2008ರಲ್ಲಿದ್ದಂತೆ-ಉಪ ನಿರ್ದೇಶಕರು, ದೈಹಿಕ ಶಿಕ್ಷಣ

ಕ್ರಮ ಸಂಖ್ಯೆ	ಜೇಷ್ಠತಾ ಪಟ್ಟಿಯಲ್ಲಿನ ಕ್ರಮ ಸಂಖ್ಯೆ	ಅಧಿಕಾರಿಗಳ ಹೆಸರು ಶ್ರೀ/ಶ್ರೀಮತಿ	ಜನ್ಮ ದಿನಾಂಕ	ಉಪ ನಿರ್ದೇಶಕರು ದೈಹಿಕ ಶಿಕ್ಷಣ ಹುದ್ದೆಗೆ ಬಡ್ತಿ ಹೊಂದಿದ ದಿನಾಂಕ	ಉಪನಿರ್ದೇಶಕರು, ದೈಹಿಕ ಶಿಕ್ಷಣ ಅಧೀಕ್ಷಕರ ವೃಂದದಲ್ಲಿ ಅರ್ಹತಾ ದಿನಾಂಕ	ಷರಾ
1.	1	ಎಸ್.ಸಿ. ಚರಂತಿಮಠ	01.08.1930	22.07.1987	24.02.1987	ನಿವೃತ್ತ
2.	3	ಟಿ.ಎಲ್. ಗಂಗಣ್ಣ	24.04.1932	05.01.1989	01.08.1988	ನಿವೃತ್ತ
3.	6	ಹೆಚ್.ಎಂ. ವೀರಭದ್ರಶಾಸ್ತ್ರಿ	15.10.1933	01.03.1991	01.05.1990	ನಿವೃತ್ತ
4.	7	ಜೆ. ರಾಮಚಂದ್ರರಾವ್	08.12.1934	04.06.1992	01.11.1991	ನಿವೃತ್ತ
5.	9	ಟಿ.ಎಲ್. ಸಿದ್ದರಾಮಯ್ಯ	05.09.1936	19.06.1993	01.01.1993	ನಿವೃತ್ತ
6.	12ಎ	ಪುಟ್ಟಚಾರ್ ಎಂ.ಎಸ್.	05.09.1936	25.03.1995	–	ನಿವೃತ್ತ

ಕ್ರಮ ಸಂಖ್ಯೆ	ಜೇಷ್ಠತಾ ಪಟ್ಟಿಯಲ್ಲಿನ ಕ್ರಮ ಸಂಖ್ಯೆ	ಅಧಿಕಾರಿಗಳ ಹೆಸರು ಶ್ರೀ/ಶ್ರೀಮತಿ	ಜನ್ಮ ದಿನಾಂಕ	ಉಪ ನಿರ್ದೇಶಕರು ದೈಹಿಕ ಶಿಕ್ಷಣ ಹುದ್ದೆಗೆ ಬಡ್ತಿ ಹೊಂದಿದ ದಿನಾಂಕ	ಉಪನಿರ್ದೇಶಕರು, ದೈಹಿಕ ಶಿಕ್ಷಣ ಅಧೀಕ್ಷಕರ ವೃಂದದಲ್ಲಿ ಅರ್ಹತಾ ದಿನಾಂಕ	ಷರಾ
7.	16	ಸಿದ್ಧರಾಮಯ್ಯ	04.04.1938	31.08.1995	–	ನಿವೃತ್ತ
8.	26	ಎಂ. ನಾರಾಯಣಶಾಸ್ತ್ರಿ	02.12.1942	16.08.1999	–	ನಿವೃತ್ತ

ಎಂ.ಎಸ್. ಸೋಮಶೇಖರ್

ಪಿಆರ್.1293

ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ, (ಆಡಳಿತ).

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್/196/2007–08, ದಿನಾಂಕ:28ನೇ ಮೇ, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು: **ಪ್ರತಿವಾದಿ/ ಆರೋಪಿ**

ಆರಕ್ಷಕ ನಿರೀಕ್ಷಕರು, ವಿ.ವಿ.ಪುರಂ, ಪೊಲೀಸ್ ಠಾಣೆ, ಮೈಸೂರು. **ವಿರುದ್ಧ** ಮಫ್ತಿಯಾರ್ ಬಿನ್ ಸರ್ಫದ್ದೀನ್

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:10.10.2007ರಂದು ಬೆಳಗ್ಗಿನ ಜಾವ 6.45ರ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ವಿ.ವಿ.ಪುರಂ, ಪೊಲೀಸ್ ಠಾಣೆ, ಮೈಸೂರು ಇವರು ಮೈಸೂರು ನಗರದ ಯಾದಗಿರಿ ರೈಲ್ವೆ ಅಂಡರ್ ಬ್ರಿಡ್ಜ್ ರಸ್ತೆಯ ಜಾವಾ ಫ್ಯಾಕ್ಟರಿಯ ಹತ್ತಿರ ಒಂದು ಬಿಳಿ ಬಣ್ಣದ ಮಾರುತಿ ಓಮ್ನಿ ಕಾರ್ ನಿಂತಿದ್ದು, ಅದರ ಹತ್ತಿರ ಒಬ್ಬ ವ್ಯಕ್ತಿ ಅನುಮಾನಾಸ್ಪದವಾಗಿ ವರ್ತಿಸುತ್ತಿದ್ದುದ್ದನ್ನು ಕಂಡು ಕಾರಿನ ಹತ್ತಿರ ತೆರಳಿ ಕಾರನ್ನು ಪರಿಶೀಲಿಸಲಾಗಿ ಮಧ್ಯ ಭಾಗದಲ್ಲಿ 5 ಬಿಳಿ ಪ್ಲಾಸ್ಟಿಕ್ ಕ್ಯಾನ್‌ಗಳಿದ್ದು, ಅದರಲ್ಲಿ ತಲಾ 30 ಲೀ.ನಂತೆ ಒಟ್ಟು 150 ಲೀ. ಮದ್ಯಸಾರವನ್ನು ಯಾವುದೇ ಪರವಾನಗಿ ಇಲ್ಲದೇ ಹೊಂದಿದ್ದ ಆರೋಪಕ್ಕಾಗಿ ಕೆಎ–03–/ಎನ್–8919 ನೋಂದಣಿ ಸಂಖ್ಯೆಯ ಮಾರುತಿ ಸುಜುಕಿ ವಾಹನವನ್ನು ಜಪ್ತುಗೊಳಿಸಿ, ಠಾಣಾ ಮೊಕದ್ದಮೆ ಸಂಖ್ಯೆ:99/2007 ರಲ್ಲಿ ಕರ್ನಾಟಕ ಅಬಕಾರಿ ಕಾಯ್ದೆ 11, 13(ಎ) ಕಲಂ 32ರ ಪ್ರಕಾರ ಮೊಕದ್ದಮೆಯನ್ನು ದಾಖಲಿಸಿ, ಸಂಬಂಧಪಟ್ಟ ವಾಹನ ಮತ್ತು ಮಾದಕದ್ರವ್ಯಗಳನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ಕೋರಿರುತ್ತಾರೆ. ಅಂತೆಯೇ ದಿನಾಂಕ:17.10.2007ರಂದು ಅಂದಿನ ಉತ್ತರ ತಾಲ್ಲೂಕಿನ ಜಾರಿ ಮತ್ತು ತನಿಖೆಯ ಅಬಕಾರಿ ಉಪ ನಿರೀಕ್ಷಕರಿಗೆ (ಪ್ರಸ್ತುತ ವಲಯ ಸಂ–2ರ ವ್ಯಾಪ್ತಿಗೆ ಒಳಪಟ್ಟಿರುತ್ತದೆ) ಹಸ್ತಾಂತರಿಸುವಂತೆ ಈ ಪ್ರಾಧಿಕಾರದಿಂದ ಅನುಮತಿ ನೀಡಲಾಗಿದೆ.

ವಶಪಡಿಸಿಕೊಂಡ ವಾಹನದ ಮಾಲೀಕತ್ವದ ವಿವರವುಳ್ಳ ಬಿ ವಹಿಯ ಪ್ರತಿಯನ್ನು ಕೋರಿ ಬೆಂಗಳೂರು (ಪೂರ್ವ) ರಾಜಾಜಿನಗರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಈ ಪ್ರಾಧಿಕಾರದಿಂದ ದಿನಾಂಕ:14.11.2007 ರಂದು ಪತ್ರ ಬರೆಯಲಾಗಿರುತ್ತದೆ. ಈ ಪ್ರಕರಣದಲ್ಲಿ ಯಾರಿಂದ ವಾಹನವನ್ನು ವಶಪಡಿಸಿಕೊಳ್ಳಲಾಗಿದೆಯೋ ಅವರಿಗೆ ವಾಹನ ಮತ್ತು ಮದ್ಯವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದೆಂದು ಕಲಂ 43(ಬಿ)ರ ಅಡಿಯಲ್ಲಿ ಕಾರಣ ಕೇಳಿ ನೋಟೀಸನ್ನು ದಿನಾಂಕ:14.11.2007ರಂದು ನೋಂದಣಿ ಅಂಚೆ ಮೂಲಕ ಕಳುಹಿಸಲಾಗಿರುತ್ತದೆ. ಸದರಿ ನೋಟೀಸ್ ವಿಳಾಸದಲ್ಲಿ ಇಲ್ಲವೆಂಬ ಷರಾದೊಂದಿಗೆ ಅಂಚೆ ಇಲಾಖೆಯವರು ಈ ಪ್ರಾಧಿಕಾರಕ್ಕೆ ಹಿಂತಿರುಗಿಸಲಾಗಿರುತ್ತದೆ. ಮೈಸೂರು ಉತ್ತರ ತಾಲ್ಲೂಕಿನ ಅಬಕಾರಿ ಉಪ ನಿರೀಕ್ಷಕರು ದಿನಾಂಕ:06.12.2007ರಲ್ಲಿ ವಾಹನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಶಿಫಾರಸ್ಸು ಮಾಡಿರುತ್ತಾರೆ. ರಾಜಾಜಿನಗರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:14.11.2007ರಂದು ಬರೆಯಲಾದ ಪತ್ರಕ್ಕೆ ಯಾವುದೇ ಪ್ರತಿಕ್ರಿಯೆ ದೊರೆಯದ ಕಾರಣ ಈ ಪ್ರಾಧಿಕಾರದಿಂದ ದಿನಾಂಕ:17.01.2008ರಂದು ಮತ್ತೊಮ್ಮೆ ಪತ್ರ ಬರೆಯಲಾಗಿರುತ್ತದೆ. ಅಂತೆಯೇ ತಮ್ಮ ಪತ್ರ ದಿನಾಂಕ:22.11.2007ರಲ್ಲಿ ಬಿ ವಹಿಯ ಪ್ರತಿಯನ್ನು ಈ ಪ್ರಾಧಿಕಾರಕ್ಕೆ ಕಳುಹಿಸಿರುತ್ತಾರೆ. ಇದನ್ನು ಪರಿಶೀಲಿಸಲಾಗಿ, ರಮೇಶ್ ಆರ್ ಬಿನ್ ಲೇಟ್ ರಂಗಯ್ಯ, ನಂ.117, ಕಿಲಾರಿ ರಸ್ತೆ, ಬೆಂಗಳೂರು ಇವರ ಒಡೆತನದಲ್ಲಿರುವುದು ದೃಢಪಟ್ಟಿರುತ್ತದೆ. ಸದರಿ ವಾಹನ ಮಾಲೀಕರಿಗೆ ದಿನಾಂಕ:10.03.2008ರಂದು ಈ ಪ್ರಾಧಿಕಾರದಿಂದ ಕಲಂ 43(ಬಿ) ರ ಅಡಿಯಲ್ಲಿ ಕಾರಣ ಕೇಳಿ ನೋಟೀಸನ್ನು ನೋಂದಣಿ ಅಂಚೆ ಮೂಲಕ ಕಳುಹಿಸಲಾಗಿದ್ದು, ವಿಳಾಸದಲ್ಲಿ ಇಲ್ಲವೆಂಬ ಷರಾದೊಂದಿಗೆ ಅಂಚೆ ಇಲಾಖೆಯವರು ಈ ಪ್ರಾಧಿಕಾರಕ್ಕೆ ಹಿಂತಿರುಗಿಸಿರುತ್ತಾರೆ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:10.10.2007ರಂದು ಮೈಸೂರು ನಗರದ ಯಾದವಗಿರಿ ರೈಲ್ವೆ ಅಂಡರ್ ಬ್ರಿಡ್ಜ್ ರಸ್ತೆಯ ಜಾವಾ ಫ್ಯಾಕ್ಟರಿಯ ಹತ್ತಿರ ಒಂದು ಬಿಳಿ ಬಣ್ಣದ ಮಾರುತಿ ಓಮ್ನಿ ಕಾರ್

ನಿಂತಿದ್ದು, ಅದರ ಹತ್ತಿರ ಒಬ್ಬ ವ್ಯಕ್ತಿ ಅನುಮಾನಸ್ಪದವಾಗಿ ವರ್ತಿಸುತ್ತಿದ್ದುದ್ದನ್ನು ಕಂಡು ಕಾರಿನ ಹತ್ತಿರ ತೆರಳಿ ಕಾರಿನ ಮಧ್ಯ ಭಾಗದಲ್ಲಿ 5 ಬಿಳಿ ಪ್ಲಾಸ್ಟಿಕ್ ಕ್ಯಾನ್‌ಗಳಿದ್ದು, ಅದರಲ್ಲಿ ತಲಾ 30 ಲೀ.ನಂತೆ ಒಟ್ಟು 150 ಲೀ. ಮದ್ಯಸಾರವನ್ನು ಯಾವುದೇ ಪರವಾನಗಿ ಇಲ್ಲದೇ ಹೊಂದಿದ್ದ ಆರೋಪಕ್ಕಾಗಿ ಕೆಎ–03/ಎನ್–8919 ನೋಂದಣಿ ಸಂಖ್ಯೆಯ ಮಾರುತಿ ಸುಜುಕಿ ವಾಹನದಲ್ಲಿ ಸಾಗಾಣಿಕೆ ಮಾಡುತ್ತಿದ್ದು ಕಂಡು ಬಂದಿರುತ್ತದೆ. ಈ ಸಂದರ್ಭದಲ್ಲಿ ಮಫ್ತಿಯಾರ್ ಬಿನ್ ಸರ್ಪದ್ದಿನ್ ಎಂಬ ಆರೋಪಿಯನ್ನು ದಸ್ತಗಿರಿ ಮಾಡಲಾಗಿರುತ್ತದೆ. ಸದರಿ ವಾಹನಕ್ಕೆ ಸಂಬಂಧಪಟ್ಟಂತೆ ಆರೋಪಿಯಾಗಲಿ/ ಮಾಲೀಕರಾಗಲಿ ತಮ್ಮ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಹಾಜರಾಗಿ ತಮ್ಮ ನಿಲುವು ಏನೆಂಬುದನ್ನು ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ.

ಈ ಪ್ರಕರಣ ದಾಖಲಾಗಿ ಸುಮಾರು (2) ವರ್ಷಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲಿ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೇ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್/196/2007–08, ದಿನಾಂಕ:28ನೇ ಮೇ, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಬಿ)ರ ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನೆಲ್ಲಾ ಅನುಸರಿಸಿದ ನಂತರ ಕಲಂ 43(ಎ) (2)ರ ಅಡಿಯಲ್ಲಿ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ ಆರಕ್ಷಕ ಉಪ ನಿರೀಕ್ಷಕರು, ವಿ.ವಿ.ಪುರಂ, ಪೊಲೀಸ್ ಠಾಣೆ, ಮೈಸೂರು ಇವರು ಹೂಡಲಾದ ಪ್ರ.ಮಾ.ವ ಸಂಖ್ಯೆ:99/2007, ದಿನಾಂಕ:10.10.2007ರಲ್ಲಿ ವಶಪಡಿಸಿಕೊಂಡ ಕೆಎ–03/ಎನ್–8919 ನೋಂದಣಿ ಸಂಖ್ಯೆಯ ಮಾರುತಿ ಓಮ್ನಿ ವಾಹನ ಮತ್ತು 150 ಲೀ. ಮದ್ಯವನ್ನು (ಮಾದರಿ ಹೊರತುಪಡಿಸಿ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ ದಿನಾಂಕ:2009ನೇ ಇಸವಿ ಮೇ ತಿಂಗಳ 28ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಖ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು).

ಈ ಆದೇಶವು ಇಂದಿನಿಂದ 30 ದಿನಗಳ ಜಾರಿಗೆ ಬರುತ್ತದೆ.

ಡಾ॥ ವೈ. ಮಂಜುನಾಥ್
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಪಿಆರ್.530

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ

ಸಂಖ್ಯೆ: ಡಿಟಿಸಿಆರ್/447/2007–08, ದಿನಾಂಕ:28ನೇ ಮೇ, 2009

ಉಪಸ್ಥಿತರು: ಡಾ॥ ವೈ. ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು:		**ಪ್ರತಿವಾದಿ/ ಆರೋಪಿ**
ಅಬಕಾರಿ ನಿರೀಕ್ಷಕರು, ಮೈಸೂರು ವಲಯ–1.	**ವಿರುದ್ಧ**	ಆರೋಪಿ ಪರಾರಿಯಾಗಿರುತ್ತಾನೆ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:23.05.2008ರಂದು ಬೆಳಿಗ್ಗಿನ ಜಾವ 3.30 ರ ಸಮಯದಲ್ಲಿ ಅಬಕಾರಿ ನಿರೀಕ್ಷಕರು, ಮೈಸೂರು ವಲಯ 1 ಇವರು ಮೈಸೂರು ತಾಲ್ಲೂಕು, ಬೆಂಗಳೂರು–ಮೈಸೂರು ರಸ್ತೆ, ಸಿದ್ಧಲಿಂಗಪುರ ಗ್ರಾಮದಲ್ಲಿರುವ ಲಾಲ್ ಬಹುದ್ದೂರ್‌ಶಾಸ್ತ್ರಿ ಸರ್ವೀಸ್ ಸ್ಟೇಷನ್ ಪಕ್ಕದಲ್ಲಿ ಅಕ್ರಮವಾಗಿ 43.200 ಲೀ. ನಕಲಿ ಮದ್ಯವನ್ನು ಕೆಎ–01–ಎಂ–6997 ನೋಂದಣಿ ಸಂಖ್ಯೆಯ ಮಾರುತಿ ಓಮ್ನಿ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವನ್ನು ಜಪ್ತುಗೊಳಿಸಿ ಪ್ರಥಮ ಮಾಹಿತಿ ವರದಿ ಸಂಖ್ಯೆ:13/2007–08 ರಲ್ಲಿ ಆರೋಪಿಯು ತಲೆ ಮರೆಸಿಕೊಂಡಿರುವುದಾಗಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 14ರ ರೀತ್ಯಾ ಅಪರಾಧವಾಗಿದ್ದು ಕಲಂ 32, 34, 38(ಎ) ಹಾಗೂ 43ರ ಪ್ರಕಾರ ಶಿಕ್ಷಾರ್ಹವಾದ್ದರಿಂದ ಮೊಕದ್ದಮೆ ದಾಖಲಿಸಿ ಸಂಬಂಧಪಟ್ಟ ದಾಖಲಾತಿಗಳನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ವಶಪಡಿಸಿಕೊಂಡ ವಾಹನದ ಮಾಲೀಕತ್ವದ ವಿವರವುಳ್ಳ ಬಿ ವಹಿಯ ಪ್ರತಿಯನ್ನು ಕೋರಿ ಬೆಂಗಳೂರು ಕೇಂದ್ರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಈ ಪ್ರಾಧಿಕಾರದಿಂದ ದಿನಾಂಕ:15.07.2008 ರಂದು ಪತ್ರ ಬರೆಯಲಾಗಿರುತ್ತದೆ. ಇದಕ್ಕೆ ಯಾವುದೇ ಪ್ರತಿಕ್ರಿಯೆ ದೊರೆಯದ ಕಾರಣ ದಿನಾಂಕ:05.11.2008ರಂದು ಪತ್ರ ವ್ಯವಹಾರ ನಡೆಸಲಾಗಿದ್ದು ಅಂತೆಯೇ ತಮ್ಮ ಪತ್ರ ದಿನಾಂಕ:03.12.2008ರಲ್ಲಿ ಬಿ ವಹಿಯ ಪ್ರತಿಯನ್ನು ಈ ಪ್ರಾಧಿಕಾರಕ್ಕೆ ಕಳುಹಿಸಿರುತ್ತಾರೆ. ಇದನ್ನು ಪರಿಶೀಲಿಸಲಾಗಿ, ಶ್ರೀ ಜಗದೀಶ್‌ಚಂದ್ರ ಮುತ್ತ ಲೇ॥ ಪ್ರೇಂಸುಕ್ ಮುತ್ತ, ನಂ.49, ಜೆ.ಸಿ. ರಸ್ತೆ, 1ನೇ ಮಹಡಿ, ವೆಂಕಟಬಿಲ್ಡಿಂಗ್, ಬೆಂಗಳೂರು–2 ಇವರ ಒಡೆತನದಲ್ಲಿರುವ ಬಿ ವಹಿಯಿಂದ ದೃಢಪಟ್ಟಿರುತ್ತದೆ. ಸದರಿ ವಾಹನ ಮಾಲೀಕರಿಗೆ ದಿನಾಂಕ:12.12.2008ರಂದು ಈ ಪ್ರಾಧಿಕಾರದಿಂದ ಕಲಂ 43(ಬಿ) ರ ಅಡಿಯಲ್ಲಿ ಕಾರಣ ಕೇಳಿ ನೋಟೀಸನ್ನು ನೋಂದಣಿ ಅಂಚೆ ಮೂಲಕ ಕಳುಹಿಸಲಾಗಿದ್ದು, ವಿಳಾಸದಲ್ಲಿ ಇಲ್ಲವೆಂಬ ಷರಾದೊಂದಿಗೆ ಅಂಚೆ ಇಲಾಖೆಯವರು ಈ ಪ್ರಾಧಿಕಾರಕ್ಕೆ ಹಿಂತಿರುಗಿಸಿರುತ್ತಾರೆ. ಬೆಂಗಳೂರು ಕೇಂದ್ರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಮೇಲ್ಕಂಡ ವಾಹನದ ತೀರುವಳಿ ಪತ್ರ (ಸಿ.ಸಿ.)ವನ್ನು ಪುತ್ತೂರು ತಾಲ್ಲೂಕಿನ ಆರ್.ಟಿ.ಓ. ರವರಿಗೆ ಕಳುಹಿಸಿರುವುದಾಗಿ ತಿಳಿಸಿರುವ ಮೇರೆ ಅವರಿಗೆ ಸಹ ಬಿ ವಹಿಯನ್ನು ಕೋರಿ ದಿನಾಂಕ:23.03.2009ರಂದು ಪತ್ರ ಬರೆಯಲಾಗಿರುತ್ತದೆ. ಅದರಂತೆ ಬಿ ವಹಿಯನ್ನು ಈ ಪ್ರಾಧಿಕಾರಕ್ಕೆ ಕಳುಹಿಸಿದ್ದು ಓಸ್ವಾಲ್ ಲೆವಿಸ್ ಬಿನ್ ಚಾರ್ಲ್ಸ್ ಲೆವಿಸ್, ಕೆಂಮಿನ್ಜೆ, ದರ್ಬೆ, ಪುತ್ತೂರು, ದಕ್ಷಿಣ ಕನ್ನಡ ಜಿಲ್ಲೆ, ಇವರಿಗೂ ಸಹ ಕಲಂ 43(ಬಿ) ರ ಅಡಿಯಲ್ಲಿ ಕಾರಣ ಕೇಳುವ ನೋಟೀಸನ್ನು ನೀಡಲಾಗಿರುತ್ತದೆ.

ಲಭ್ಯವಿರುವ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ದಿನಾಂಕ:23.05.2008ರಂದು ಮೈಸೂರು ತಾಲ್ಲೂಕು, ಬೆಂಗಳೂರು–ಮೈಸೂರು ರಸ್ತೆ, ಸಿದ್ಧಲಿಂಗಪುರ ಗ್ರಾಮದಲ್ಲಿರುವ ಲಾಲ್ ಬಹುದ್ದೂರ್‌ಶಾಸ್ತ್ರಿ ಸರ್ವೀಸ್ ಸ್ಟೇಷನ್ ಪಕ್ಕದಲ್ಲಿ ಅಕ್ರಮವಾಗಿ 43.200 ಲೀ. ನಕಲಿ ಮದ್ಯವನ್ನು ಕೆಎ–01–ಎಂ–6997 ನೋಂದಣಿ ಸಂಖ್ಯೆಯ ಮಾರುತಿ ಓಮ್ನಿ ವಾಹನದಲ್ಲಿ ಹೊಂದಿ ಸಾಗಾಣಿಕೆ ಮಾಡುತ್ತಿದ್ದು ಕಂಡು ಬಂದಿರುತ್ತದೆ. ಈ ಸಂದರ್ಭದಲ್ಲಿ ಆರೋಪಿಯು ಪರಾರಿಯಾಗಿರುತ್ತಾರೆ. ಸದರಿ ವಾಹನಕ್ಕೆ ಸಂಬಂಧಪಟ್ಟಂತೆ ಆರೋಪಿಯಾಗಲಿ/ ಮಾಲೀಕರಾಗಲಿ ತಮ್ಮ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಪ್ರಾಧಿಕಾರದ ಮುಂದೆ ಹಾಜರಾಗಿ ತಮ್ಮ ನಿಲುವು ಏನೆಂಬುದನ್ನು ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಆರೋಪಿತರು ಇಲ್ಲದ ಪ್ರಕರಣಗಳಲ್ಲಿ ಮೊಕದ್ದಮೆ ದಾಖಲಾದ 30 ದಿನಗಳೊಳಗಾಗಿ ವಾಹನ ಮತ್ತು ಮಾದಕ ದ್ರವ್ಯಗಳು ತನ್ನದೆಂದು ಮಾಲೀಕತ್ವ ನಿರೂಪಿಸದಿದ್ದಲ್ಲಿ ಅಂತಹ ವಸ್ತುಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ (ಸಿ)ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಸುಮಾರು (10) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲಿ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ/ ಏಜೆಂಟರ್ ಗಮನಕ್ಕೆ ಬಾರದೆ ಮತ್ತು ಅವರುಗಳು ಶಾಮೀಲಾಗದೇ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೆ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಡಿಟಿಸಿಆರ್/447/2007–08, ದಿನಾಂಕ:28ನೇ ಮೇ, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ)ರ ಅಡಿಯಲ್ಲಿ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ ಅಬಕಾರಿ ನಿರೀಕ್ಷಕರು, ಮೈಸೂರು ವಲಯ–1 ಇವರು ಹೂಡಲಾದ ಪ್ರ.ಮಾ.ವ. ಸಂಖ್ಯೆ:03/2007–08, ದಿನಾಂಕ:23.05.2008ರಲ್ಲಿ ವಶಪಡಿಸಿಕೊಂಡ ಕೆಎ–09/ಎಂ–6997 ಮಾರುತಿ ಓಮ್ನಿ ವಾಹನ ಮತ್ತು 43.200 ಲೀ. ನಕಲಿ ಮದ್ಯವನ್ನು (ಮಾದರಿ ಹೊರತುಪಡಿಸಿ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ ದಿನಾಂಕ:2009ನೇ ಇಸವಿ ಮೇ ತಿಂಗಳ 28ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಖ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು).

ಈ ಆದೇಶವು ಇಂದಿನಿಂದ 30 ದಿನಗಳ ಜಾರಿಗೆ ಬರುತ್ತದೆ.

ಡಾ॥ ವೈ. ಮಂಜುನಾಥ್

ಪಿಆರ್.536

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್:06/2009-10, ದಿನಾಂಕ:08-10-2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ದ**	**ಪ್ರತಿವಾದಿ / ಆರೋಪಿ**
ಅಬಕಾರಿ ನಿರೀಕ್ಷಕರು, ಮೈಸೂರು ಉಪ ವಿಭಾಗ, ಮೈಸೂರು.		ತ್ಯಾಗರಾಜು ಬಿನ್ ಲೇ ಬಸವರಾಜು

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:15-07-2009ರಂದು ರಾತ್ರಿ 8:00 ಗಂಟೆ ಸಮಯದಲ್ಲಿ ಅಬಕಾರಿ ನಿರೀಕ್ಷಕರು, ಉಪ ವಿಭಾಗ, ಮೈಸೂರು ಇವರು ಮೈಸೂರು ತಾಲ್ಲೂಕು, ಮೈಸೂರು-ಟಿ.ನರಸೀಪುರ ರಸ್ತೆಯಲ್ಲಿ (ಆಲನಹಳ್ಳಿಯಿಂದ ಚಿಕ್ಕಹಳ್ಳಿಗೆ ಹೋಗುವ ಮುಖ್ಯ ರಸ್ತೆ) ಕೆಎ-03/ಎನ್-8056 ನೋಂದಣಿ ಸಂಖ್ಯೆಯ ಮಾರುತಿ-800 ವಾಹನದಲ್ಲಿ ಅಕ್ರಮವಾಗಿ 129.600 ಲೀ. ನಕಲಿ ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ನಕಲಿ ಮದ್ಯವನ್ನು ಜಪ್ತುಪಡಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ : 01/09-10 ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 13(ಎಫ್), 14ರ ರೀತ್ಯಾ, ಅಪರಾಧವಾಗಿದ್ದು ಕಲಂ 32, 38(ಎ) ಮತ್ತು 43 ಹಾಗೂ 43(ಎ)ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ತ್ಯಾಗರಾಜು ಬಿನ್ ಲೇಟ್ ಬಸವರಾಜು ಎಂಬ ಆರೋಪಿಯನ್ನು ದಸ್ತಗಿರಿ ಮಾಡಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿರುವುದಾಗಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ವಶಪಡಿಸಿಕೊಂಡ ವಾಹನಗಳ' ಮಾಲೀಕತ್ವದ ವಿವರವುಳ್ಳ 'ಬಿ' ವಹಿಯ ಪ್ರತಿಯನ್ನು ಕೋರಿ, ಬೆಂಗಳೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:22-09-2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಈ ಬಗ್ಗೆ ಇದೂವರೆವಿಗೂ ಯಾವುದೇ ಮಾಹಿತಿ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ : 15-07-2009ರಂದು ಮೈಸೂರು ತಾಲ್ಲೂಕು, ಮೈಸೂರು-ಟಿ.ನರಸೀಪುರ ರಸ್ತೆಯಲ್ಲಿ (ಆಲನಹಳ್ಳಿಯಿಂದ ಚಿಕ್ಕಹಳ್ಳಿಗೆ ಹೋಗುವ ಮುಖ್ಯ ರಸ್ತೆ) ಕೆಎ-03/ಎನ್-8056 ನೋಂದಣಿ ಸಂಖ್ಯೆಯ ಮಾರುತಿ-800 ವಾಹನದಲ್ಲಿ ಅಕ್ರಮವಾಗಿ 129.600 ಲೀ. ವಿವಿಧ ಮಾದರಿಯ ನಕಲಿ ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 38(ಎ) 43ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಇದುವರೆವಿಗೂ ಯಾವುದೇ ಪ್ರತಿಕ್ರಿಯೆಯನ್ನು ನೀಡಿರುವುದಿಲ್ಲ. ಈ ಬಗ್ಗೆ ಪ್ರತಿವಾದಿಗಳು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯ ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (02) ತಿಂಗಳಿಗೂ ಹೆಚ್ಚು ಕಾಲ ಕಳೆದಿರುತ್ತದೆ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ / ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್ : 06/2009-10, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಎ) (2) ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ನಿರೀಕ್ಷಕರು, ಉಪ ವಿಭಾಗ, ಮೈಸೂರು ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 01/2009-10, ದಿನಾಂಕ:15-07-2009ರಂದು ವಶಪಡಿಸಿಕೊಂಡ ಕೆಎ-03/ಎನ್-8056 ನೋಂದಣಿ ಸಂಖ್ಯೆಯ ಮಾರುತಿ-800 ಕಾರ್ ವಾಹನವನ್ನು (129.600 ಲೀ. ನಕಲಿ ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 08ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಖ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ.ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್.1177

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್:616/2008–09, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ಆರೋಪಿ**
ಅಬಕಾರಿ ಉಪ ನಿರೀಕ್ಷಕರು, ಟಿ.ನರಸೀಪುರ ವಲಯ, ಟಿ.ನರಸೀಪುರ.		ಆರೋಪಿ ಪರಾರಿಯಾಗಿರುತ್ತಾನೆ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:27–06–2009ರಂದು ಬೆಳಿಗ್ಗೆ 6:00 ಗಂಟೆ ಸಮಯದಲ್ಲಿ ಅಬಕಾರಿ ಉಪ ನಿರೀಕ್ಷಕರು, ಟಿ.ನರಸೀಪುರ ವಲಯ ಇವರು ಟಿ.ನರಸೀಪುರ ತಾಲ್ಲೂಕು, ಬನ್ನೂರು ಹೋಬಳಿ, ಬನ್ನೂರು–ಯಾಚೇನಹಳ್ಳಿ ರಸ್ತೆ, ದಾಸೇಗೌಡನ ಕೊಪ್ಪಲು ಹತ್ತಿರ ಸಿಕೆಓ–2627 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ಸಿಡಿ–100 ವಾಹನದಲ್ಲಿ ಅಕ್ರಮವಾಗಿ 8.640 ಲೀ. ನಕಲಿ ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ನಕಲಿ ಮದ್ಯವ'ನ್ನು ಜಪ್ತುಪಡಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ:26/08–09 ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11 ಮತ್ತು 14ರ ರೀತ್ಯಾ ಅಪರಾಧವಾಗಿದ್ದು, ಕಲಂ 32, 38(ಎ)ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿ ಪರಾರಿಯಾಗಿರುವುದಾಗಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ವಶಪಡಿಸಿಕೊಂಡ ವಾಹನಗಳ' ಮಾಲೀಕತ್ವದ ವಿವರವುಳ್ಳ 'ಬಿ' ವಹಿಯ ಪ್ರತಿಯನ್ನು ಕೋರಿ, ಬೆಂಗಳೂರು ಕೇಂದ್ರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:22–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಈ ಬಗ್ಗೆ ಇದೂವರೆವಿಗೂ ಯಾವುದೇ ಮಾಹಿತಿ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:27–06–2009ರಂದು ಟಿ.ನರಸೀಪುರ ತಾಲ್ಲೂಕು, ಬನ್ನೂರು ಹೋಬಳಿ, ಬನ್ನೂರು–ಯಾಚೇನಹಳ್ಳಿ ರಸ್ತೆ, ದಾಸೇಗೌಡನ ಕೊಪ್ಪಲು ಹತ್ತಿರ ಸಿಕೆಓ–2627 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ಸಿಡಿ–100 ವಾಹನದಲ್ಲಿ ಅಕ್ರಮವಾಗಿ 8.640 ಲೀ. ನಕಲಿ ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 38(ಎ) 43ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಇದುವರೆವಿಗೂ ಯಾವುದೇ ಪ್ರತಿಕ್ರಿಯೆಯನ್ನು ನೀಡಿರುವುದಿಲ್ಲ. ಈ ಬಗ್ಗೆ ಪ್ರತಿವಾದಿಗಳು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯ ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣದಲ್ಲಿ ಆರೋಪಿಯು ಪರಾರಿಯಾಗಿದ್ದು ಇಂತಹ ಮೊಕದ್ದಮೆಗಳಲ್ಲಿ ಪ್ರಕರಣ ದಾಖಲಾದ ಒಂದು ತಿಂಗಳೊಳಗಾಗಿ ವಾಹನದ ಮಾಲೀಕತ್ವವನ್ನು ನಿರೂಪಿಸಲು ಈ ಪ್ರಾಧಿಕಾರದ ಮುಂದೆ ಹಾಜರಾಗದಿದ್ದಲ್ಲಿ ಅಂತಹ ಅಬಕಾರಿ ವಸ್ತುಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ) ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕಾನೂನಿನಲ್ಲಿ ಅವಕಾಶವಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (15) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ

/ ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್:616/2008–09, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಸಿ) ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ಉಪ ನಿರೀಕ್ಷಕರು, ಟಿ.ನರಸೀಪುರ ವಲಯ ಟಿ.ನರಸೀಪುರ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 26/2008–09, ದಿನಾಂಕ: 27–06–2009ರಂದು ವಶಪಡಿಸಿಕೊಂಡ ಸಿಕೆಏ–2627 ನೋಂದಣಿ ಸಂಖ್ಯೆಯ ಹೀರೋ ಹೋಂಡಾ ಸಿಡಿ–100 ವಾಹನವನ್ನು (8.640 ಲೀ. ನಕಲಿ ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 08ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ.ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್.1132

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್: 03/2009–10, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ಆರೋಪಿ**
ಅಬಕಾರಿ ಉಪ ನಿರೀಕ್ಷಕರು, ಹೆಚ್.ಡಿ.ಕೋಟೆ ವಲಯ, ಹೆಚ್.ಡಿ.ಕೋಟೆ.		ಎಸ್. ಧರ್ಮ ಬಿನ್ ಎಂ. ಸಿದ್ದೇಗೌಂಡರ್

ಪ್ರಕರಣದ ಮುಖ್ಯಾಂಶಗಳು:

ದಿನಾಂಕ : 09–07–2009ರಂದು ಬೆಳಿಗ್ಗೆ 11:00 ಗಂಟೆ ಸಮಯದಲ್ಲಿ ಅಬಕಾರಿ ಉಪ ನಿರೀಕ್ಷಕರು, ಹೆಚ್.ಡಿ.ಕೋಟೆ ವಲಯ ಇವರು ಹೆಚ್.ಡಿ.ಕೋಟೆ ತಾಲ್ಲೂಕು, ಕಸಬಾ ಹೋಬಳಿ, ಬೂದನೂರು ಗ್ರಾಮದ ರಸ್ತೆಯ ಬದಿಯಲ್ಲಿ ಟಿಎನ್–29/ಸಿ–6112 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 35 ಲೀ. ಕಲಬೆರಕೆ ಸೇಂದಿಯನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಸೇಂದಿಯನ್ನು ಜಪ್ತುಪಡಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ : 01/09–10 ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 13(2)(ಸಿ), 15ರ ರೀತ್ಯಾ, ಅಪರಾಧವಾಗಿದ್ದು ಕಲಂ 32, 38(ಎ) ಮತ್ತು 43ರ ರೀತ್ಯಾ ಶಿಕ್ಷಾರ್ಹವಾದ್ದರಿಂದ ಎಸ್. ಧರ್ಮ ಬಿನ್ ಎಂ. ಸಿದ್ದೇಗೌಂಡರ್ ಎಂಬ ಆರೋಪಿಯನ್ನು ದಸ್ತಗಿರಿ ಮಾಡಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿರುವುದಾಗಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯ ಪ್ರತಿಯನ್ನು ಕೋರಿ, ಚೆನ್ನೈನ ಪ್ರಾದೇಶಿಕ ಸಾರಿಗೆ ಆಯುಕ್ತರಿಗೆ ದಿನಾಂಕ:22–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಈ ಬಗ್ಗೆ ಇದೂವರೆವಿಗೂ ಯಾವುದೇ ಮಾಹಿತಿ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ : 09–07–2009ರಂದು ಹೆಚ್.ಡಿ.ಕೋಟೆ ತಾಲ್ಲೂಕು, ಕಸಬಾ ಹೋಬಳಿ, ಬೂದನೂರು ಗ್ರಾಮದ ರಸ್ತೆಯ ಬದಿಯಲ್ಲಿ ಟಿಎನ್–29/ಸಿ–6112 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 35 ಲೀ. ಸೇಂದಿಯನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 38(ಎ) 43ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಈ ಬಗ್ಗೆ ಪ್ರತಿವಾದಿಗಳು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯ ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (03) ತಿಂಗಳಿಗೂ ಹೆಚ್ಚು ಕಾಲ ಕಳೆದಿರುತ್ತದೆ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ, ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ / ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್ : 03/2009–10, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಎ) (2) ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ಉಪ ನಿರೀಕ್ಷಕರು, ಹೆಚ್.ಡಿ.ಕೋಟೆ ವಲಯ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 01/2009–10, ದಿನಾಂಕ: 09–07–2009ರಂದು ವಶಪಡಿಸಿಕೊಂಡ ಟಿಎನ್–29/ಸಿ–6112 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ ವಾಹನವನ್ನು (35 ಲೀ. ಸೇಂದಿಯನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 08ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಖ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ.ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್.1176

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್: 27/2009–10, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ಆರೋಪಿ**
ಅಬಕಾರಿ ಉಪ ನಿರೀಕ್ಷಕರು, ನಂಜನಗೂಡು ವಲಯ, ನಂಜನಗೂಡು.		ಆರೋಪಿ ಪರಾರಿಯಾಗಿರುತ್ತಾನೆ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ : 04–08–2009ರಂದು ಸಂಜೆ 4:00 ಗಂಟೆ ಸಮಯದಲ್ಲಿ ಅಬಕಾರಿ ಉಪ ನಿರೀಕ್ಷಕರು, ನಂಜನಗೂಡು ವಲಯ ಇವರು ನಂಜನಗೂಡು ತಾಲ್ಲೂಕು, ಕೌಲ0ದೆ ಹೋಬಳಿ, ಹೆಡತಲೆ–ಹೆಮ್ಮರಗಾಲಕ್ಕೆ ಹೋಗುವ ರಸ್ತೆಯ ಮಾರ್ಗ ಮಧ್ಯದಲ್ಲಿ ಕೆಎ–04/ಕ್ಯೂ–1876 ನೋಂದಣಿ ಸಂಖ್ಯೆಯ ಕವಾಸಕಿ ಬಜಾಜ್ ಮೋಟಾರ್ ಬೈಕ್ ವಾಹನದಲ್ಲಿ ಅಕ್ರಮವಾಗಿ 8.640 ಲೀ. ನಕಲಿ ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ನಕಲಿ ಮದ್ಯವ'ನ್ನು ಜಪ್ತುಪಡಿಸಿ, ಪ್ರಥಮ ಮಾಹಿತಿ ವರದಿ ಸಂಖ್ಯೆ : 03/09–10 ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 11, 13 ಮತ್ತು 14ರ ರೀತ್ಯಾ ಅಪರಾಧವಾಗಿದ್ದು, ಕಲಂ 32, 38, 43(ಎ)ರ' ರೀತ್ಯಾ ಶಿಕ್ಷಾರ್ಹವಾದ್ದರಿಂದ ಆರೋಪಿ ಪರಾರಿಯಾಗಿರುವುದಾಗಿ ಮೊಕದ್ದಮೆ ದಾಖಲಿಸಿ, ಪ್ರಥಮ ಮಾಹಿತಿ ವರದಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯ ಪ್ರತಿಯನ್ನು ಕೋರಿ, ಬೆಂಗಳೂರು ಉತ್ತರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ : 22–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಈ ಬಗ್ಗೆ ಇದೂವರೆವಿಗೂ ಯಾವುದೇ ಮಾಹಿತಿ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:04–08–2009ರಂದು ನಂಜನಗೂಡು ತಾಲ್ಲೂಕು, ಕೌಲ0ದೆ ಹೋಬಳಿ, ಹೆಡತಲೆ–ಹೆಮ್ಮರಗಾಲಕ್ಕೆ ಹೋಗುವ ರಸ್ತೆಯ ಮಾರ್ಗ ಮಧ್ಯದಲ್ಲಿ ಕೆಎ–04/ಕ್ಯೂ–1876 ನೋಂದಣಿ ಸಂಖ್ಯೆಯ ಕವಾಸಕಿ ಬಜಾಜ್ ಮೋಟಾರ್ ಬೈಕ್ ವಾಹನದಲ್ಲಿ ಅಕ್ರಮವಾಗಿ 8.640 ಲೀ. ನಕಲಿ ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 38(ಎ) 43ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಇದುವರೆವಿಗೂ ಯಾವುದೇ ಪ್ರತಿಕ್ರಿಯೆಯನ್ನು ನೀಡಿರುವುದಿಲ್ಲ. ಈ ಬಗ್ಗೆ ಪ್ರತಿವಾದಿಗಳು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಸ್ಪಷ್ಟವಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯ ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣದಲ್ಲಿ ಆರೋಪಿಯು ಪರಾರಿಯಾಗಿದ್ದು ಇಂತಹ ಮೊಕದ್ದಮೆಗಳಲ್ಲಿ ಪ್ರಕರಣ ದಾಖಲಾದ ಒಂದು ತಿಂಗಳೊಳಗಾಗಿ ವಾಹನದ ಮಾಲೀಕತ್ವವನ್ನು ನಿರೂಪಿಸಲು ಈ ಪ್ರಾಧಿಕಾರದ ಮುಂದೆ ಹಾಜರಾಗದಿದ್ದಲ್ಲಿ ಅಂತಹ ಅಬಕಾರಿ ವಸ್ತುಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ) ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕಾನೂನಿನಲ್ಲಿ ಅವಕಾಶವಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (2) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ / ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮೀಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್ : 27/2009–10, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಸಿ) ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಅಬ್ಕಾರಿ ಉಪ ನಿರೀಕ್ಷಕರು, ನಂಜನಗೂಡು ವಲಯ ನಂಜನಗೂಡು ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 03/2009–10, ದಿನಾಂಕ: 04–08–2009ರಂದು ವಶಪಡಿಸಿಕೊಂಡ ಕೆಎ–04/ಕ್ಯೂ–1876 ನೋಂದಣಿ ಸಂಖ್ಯೆಯ ಕವಾಸಕಿ ಬಜಾಜ್ ಮೋಟಾರ್ ಬೈಕ್ ವಾಹನವನ್ನು (8.640 ಲೀ. ನಕಲಿ ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 08ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ.ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್.1175

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್: 191(ಪೊಲೀಸ್)/2008–09, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ಆರೋಪಿ**
ಆರಕ್ಷಕ ಉಪ ನಿರೀಕ್ಷಕರು ಟಿ.ನರಸೀಪುರ ಪೋಲೀಸ್ ಠಾಣೆ, ಟಿ.ನರಸೀಪುರ.		ಮಲ್ಲೇಶ ಬಿನ್ ಮರಿನಂಜಯ್ಯ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ : 04–04–2009ರಂದು ಬೆಳಿಗ್ಗೆ 11:00 ಗಂಟೆಯ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಟಿ.ನರಸೀಪುರ ಪೋಲೀಸ್ ಠಾಣೆ ಇವರು ಟಿ.ನರಸೀಪುರ ಟೌನ್, ಚೌಡಯ್ಯ ಸರ್ಕಲ್ ಬಳಿ ಕೆಎ–05/ಇಡಿ–2569 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 5.040 ಲೀ. ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವ"ನ್ನು ಜಪ್ತುಗೊಳಿಸಿ, ಮಲ್ಲೇಶ ಬಿನ್ ಮರಿನಂಜಯ್ಯ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ : 82/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ: 04–05–09ರಂದು ಈ ಪ್ರಾಧಿಕಾರಕ್ಕೆ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ : 25.05.2009ರಂದು ಟಿ.ನರಸೀಪುರ ವಲಯ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ" ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರು ದಕ್ಷಿಣ ಸಾರಿಗೆ ಅಧಿಕಾರಿಗಳಿಗೆ ದಿನಾಂಕ : 17–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದುವೆರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ : 04–04–2009ರಂದು ಟಿ.ನರಸೀಪುರ ಟೌನ್, ಚೌಡಯ್ಯ ಸರ್ಕಲ್ ಬಳಿ ಕೆಎ–05/ಇಡಿ–2569 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 5.040 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (6) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ / ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮಿಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್/191(ಪೋಲೀಸ್)/2008–09, ದಿನಾಂಕ:17ನೇ ಸೆಪ್ಟೆಂಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ಟಿ.ನರಸೀಪುರ ಪೋಲೀಸ್ ಠಾಣೆ। ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 82/2009, ದಿನಾಂಕ: 04–04–09ರಂದು ವಶಪಡಿಸಿಕೊಂಡ ಕೆಎ–05/ಇಡಿ–2569 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ಸ್ ವಾಹನವನ್ನು (5.040 ಲೀ.ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಸೆಪ್ಟಂಬರ್ ತಿಂಗಳ 24ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ.ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್.1165

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್: 22(ಪೊಲೀಸ್)/2009–10, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ದ**	**ಪ್ರತಿವಾದಿ/ಆರೋಪಿ**
ಆರಕ್ಷಕ ಉಪ ನಿರೀಕ್ಷಕರು ಟಿ.ನರಸೀಪುರ ಪೋಲೀಸ್ ಠಾಣೆ, ಟಿ.ನರಸೀಪುರ.		ಶಿವಸ್ವಾಮಿ ಬಿನ್ ಮಾದಯ್ಯ ಮಹದೇವಸ್ವಾಮಿ ಬಿನ್ ನಾಗಣ್ಣ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:21–06–2009ರಂದು ಸಾಯಂಕಾಲ 5:15 ಗಂಟೆಯ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಟಿ.ನರಸೀಪುರ ಪೋಲೀಸ್ ಠಾಣೆ ಇವರು ಟಿ.ನರಸೀಪುರ ತಾಲ್ಲೂಕು, ನಿಲುಸೋಗೆ ಗ್ರಾಮದ ಬಸ್ ನಿಲ್ದಾಣದ ಬಳಿ ಸಿಟಿಎಕ್ಸ್–4573 ನೋಂದಣಿ ಸಂಖ್ಯೆಯ ಅಂಬಾಸಿಡರ್ ಕಾರ್ ವಾಹನದಲ್ಲಿ ಅಕ್ರಮವಾಗಿ 69.120 ಲೀ. ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವ'ನ್ನು ಜಪ್ತುಗೊಳಿಸಿ, ಶಿವಸ್ವಾಮಿ ಬಿನ್ ಮಾದಯ್ಯ ಮತ್ತು ಮಹದೇವಸ್ವಾಮಿ ಬಿನ್ ನಾಗಣ್ಣ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ:146/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ: 23–06–09ರಂದು ಈ ಪ್ರಾಧಿಕಾರಕ್ಕೆ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:15.07.2009ರಂದು ಟಿ.ನರಸೀಪುರ ವಲಯ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ' ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಬೆಂಗಳೂರು ಕೇಂದ್ರ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:24–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:21–06–2009ರಂದು ಟಿ.ನರಸೀಪುರ ತಾಲ್ಲೂಕು, ನಿಲುಸೋಗೆ ಗ್ರಾಮದ ಬಸ್ ನಿಲ್ದಾಣದ ಬಳಿ ಸಿಟಿಎಕ್ಸ್–4573 ನೋಂದಣಿ ಸಂಖ್ಯೆಯ ಅಂಬಾಸಿಡರ್ ಕಾರ್ ವಾಹನದಲ್ಲಿ ಅಕ್ರಮವಾಗಿ 69.120 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (3) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಅಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ / ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮಿಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್/22 (ಪೋಲೀಸ್)/2009–10, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ಟಿ.ನರಸೀಪುರ ಪೋಲೀಸ್ ಠಾಣೆ। ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 146/2009,

ದಿನಾಂಕ: 21–06–09ರಂದು ವಶಪಡಿಸಿಕೊಂಡ ಸಿಟಿಎಕ್ಸ್–4573 ನೋಂದಣಿ ಸಂಖ್ಯೆಯ ಅಂಬಾಸಿಡರ್ ಕಾರ್ ವಾಹನವನ್ನು (69.120 ಲೀ.ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 08ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಖ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ. ಮಂಜುನಾಥ್

ಪಿ.ಆರ್.1181

ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್: 06(ಪೊಲೀಸ್)/2009–10, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ಆರೋಪಿ**
ಆರಕ್ಷಕ ನಿರೀಕ್ಷಕರು, ವಿಶೇಷ ಪೋಲೀಸ್ ಠಾಣೆ, ಅ.ಜಾ ಮತ್ತು ಲಾ.ನಿ ವಿಭಾಗ, ಮೈಸೂರು ಜಿಲ್ಲೆ, ಮೈಸೂರು.		ಮಹದೇವಸ್ವಾಮಿ ಬಿನ್ ಜವರನಾಯ್ಕ.

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:24–06–2009ರಂದು ಬೆಳಿಗ್ಗೆ 11:30 ಗಂಟೆಯ ಸಮಯದಲ್ಲಿ ಆರಕ್ಷಕ ನಿರೀಕ್ಷಕರು, ವಿಶೇಷ ಪೋಲೀಸ್ ಠಾಣೆ, ಅ.ಜಾ ಮತ್ತು ಲಾ.ನಿ ವಿಭಾಗ, ಮೈಸೂರು ಜಿಲ್ಲೆ ಇವರು ನಂಜನಗೂಡು ತಾಲ್ಲೂಕು, ಬನ್ನಾರಿ ಅಮ್ಮನ್ ಸಕ್ಕರೆ ಕಾರ್ಖಾನೆ ಬಳಿ ಇರುವ ರಸ್ತೆಯ ಬಳಿ ಕೆಎ–11/ಕೆ–2936 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 8.280 ಲೀ. ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವ'ನ್ನು ಜಪ್ತುಗೊಳಿಸಿ, ಮಹದೇವಸ್ವಾಮಿ ಬಿನ್ ಜವರನಾಯ್ಕ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ : 17/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ:25–06–09ರಂದು ಈ ಪ್ರಾಧಿಕಾರಕ್ಕೆ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:13.07.2009ರಂದು ನಂಜನಗೂಡು ವಲಯ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ' ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮಂಡ್ಯ ಜಿಲ್ಲೆಯ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:24–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:24–06–2009ರಂದು ನಂಜನಗೂಡು ತಾಲ್ಲೂಕು, ಬನ್ನಾರಿ ಅಮ್ಮನ್ ಸಕ್ಕರೆ ಕಾರ್ಖಾನೆ ಬಳಿ ಇರುವ ರಸ್ತೆಯ ಬಳಿ ಕೆಎ–11/ಕೆ–2936 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 8.280 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (3) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ

ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ / ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮಿಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್/06 (ಪೋಲೀಸ್)/2009–10, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ನಿರೀಕ್ಷಕರು, ವಿಶೇಷ ಪೋಲೀಸ್ ಠಾಣೆ, ಅ.ಜಾ ಮತ್ತು ಲಾ.ನಿ ವಿಭಾಗ, ಮೈಸೂರು ಜಿಲ್ಲೆ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 17/2009, ದಿನಾಂಕ:24–06–09ರಂದು ವಶಪಡಿಸಿಕೊಂಡ ಕೆಎ–11/ಕೆ–2936 ನೋಂದಣಿ ಸಂಖ್ಯೆಯ ಟಿ.ವಿ.ಎಸ್ ಎಕ್ಸೆಲ್ ವಾಹನವನ್ನು (8.280 ಲೀ. ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 08ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ.ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್.1164

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್: 188(ಪೊಲೀಸ್)/2008–09, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ಆರೋಪಿ**
ಆರಕ್ಷಕ ನಿರೀಕ್ಷಕರು,		ಅಶೋಕ ಬಿನ್ ಕೃಷ್ಣೇಗೌಡ
ವಿಶೇಷ ಪೋಲೀಸ್ ಠಾಣೆ,		ಶ್ರೀಧರ ಬಿನ್ ಕೆ. ವೆಂಕಟರಾಮು
ಅ.ಜಾ ಮತ್ತು ಲಾ.ನಿ ವಿಭಾಗ,		
ಮೈಸೂರು ಜಿಲ್ಲೆ, ಮೈಸೂರು.		

ಪ್ರಕರಣದ ಮುಖ್ಯಾಂಶಗಳು:

ದಿನಾಂಕ : 04–05–2009ರಂದು ರಾತ್ರಿ 12:00 ಗಂಟೆಯ ಸಮಯದಲ್ಲಿ ಆರಕ್ಷಕ ನಿರೀಕ್ಷಕರು, ವಿಶೇಷ ಪೋಲೀಸ್ ಠಾಣೆ, ಅ.ಜಾ ಮತ್ತು ಲಾ.ನಿ ವಿಭಾಗ, ಮೈಸೂರು ಜಿಲ್ಲೆ ಇವರು ಗೊದ್ದನಪುರ–ಹುಲ್ಲಳ್ಳಿ ಕಡೆಗೆ ಹೋಗುವ ರಸ್ತೆಯಲ್ಲಿ ಕೆಎ–19/ಎಂ–5089 ನೋಂದಣಿ ಸಂಖ್ಯೆಯ ಟಾಟಾ ಸಿಯಾರಾ ವಾಹನದಲ್ಲಿ ಅಕ್ರಮವಾಗಿ 60.480 ಲೀ. ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವ್‌ನ್ನು ಜಪ್ತುಗೊಳಿಸಿ, ಅಶೋಕ ಬಿನ್ ಕೃಷ್ಣೇಗೌಡ ಮತ್ತು ಶ್ರೀಧರ್ ಬಿನ್ ವೆಂಕಟರಾಮಯ್ಯ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ : 03/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ: 05–05–09ರಂದು ಈ ಪ್ರಾಧಿಕಾರಕ್ಕೆ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:18.05.2009ರಂದು ನಂಜನಗೂಡು ವಲಯ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಸಾರಿಗೆ ಅಧಿಕಾರಿಗಳಿಗೆ ದಿನಾಂಕ : 17–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದುವೆರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ : 04–05–2009ರಂದು ಗೊದ್ದನಪುರ–ಹುಲ್ಲಳ್ಳಿ ಕಡೆಗೆ ಹೋಗುವ ರಸ್ತೆಯಲ್ಲಿ ಕೆಎ–19/ಎಂ–5089 ನೋಂದಣಿ ಸಂಖ್ಯೆಯ ಟಾಟಾ ಸಿಯಾರಾ ವಾಹನದಲ್ಲಿ ಅಕ್ರಮವಾಗಿ 60.480 ಲೀ. ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (5) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ / ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮಿಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್/188 (ಪೋಲೀಸ್)/2009–10, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ನಿರೀಕ್ಷಕರು, ವಿಶೇಷ ಪೋಲೀಸ್ ಠಾಣೆ, ಅ.ಜಾ ಮತ್ತು ಲಾ.ನಿ ವಿಭಾಗ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 03/2009, ದಿನಾಂಕ: 04–05–09ರಂದು ವಶಪಡಿಸಿಕೊಂಡ ಕೆಎ–19/ಎಂ–5089 ನೋಂದಣಿ ಸಂಖ್ಯೆಯ ಟಾಟಾ ಸಿಯಾರಾ ವಾಹನವನ್ನು (60.480 ಲೀ. ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 08ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ.ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್.1180

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್: 192(ಪೊಲೀಸ್)/2008–09, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ಧ**	**ಪ್ರತಿವಾದಿ/ಆರೋಪಿ**
ಆರಕ್ಷಕ ಉಪ ನಿರೀಕ್ಷಕರು, ತಲಕಾಡು ಪೋಲೀಸ್ ಠಾಣೆ, ಟಿ.ನರಸೀಪುರ.		ಶಾಂತರಾಜು ಬಿನ್ ಚಿಕ್ಕಮಾದಯ್ಯ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ:18–05–2009ರಂದು ಮಧ್ಯಾಹ್ನ 12:45 ಗಂಟೆಯ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ತಲಕಾಡು ಪೋಲೀಸ್ ಠಾಣೆ ಇವರು ಟಿ.ನರಸೀಪುರ ತಾಲ್ಲೂಕು, ತಲಕಾಡು ಹಳೇ ಬೀದಿಯ ನವಗ್ರಹ ದೇವಸ್ಥಾನದ ಹತ್ತಿರ, ಮಾಧವ ಮಂತ್ರಿಯ ನಾಲೆಯ ರಸ್ತೆಯ ಬಳಿ ಕೆಎ–09/ಜೆ–8307 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 6.660 ಲೀ. ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವ'ನ್ನು ಜಪ್ತುಗೊಳಿಸಿ, ಶಾಂತರಾಜು ಬಿನ್ ಚಿಕ್ಕಮಾದಯ್ಯ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ : 47/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ: 30–05–09ರಂದು ಈ ಪ್ರಾಧಿಕಾರಕ್ಕೆ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ : 03.06.2009ರಂದು ಟಿ.ನರಸೀಪುರ ವಲಯ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಮೈಸೂರು ಪೂರ್ವ ಸಾರಿಗೆ ಅಧಿಕಾರಿಗಳಿಗೆ ದಿನಾಂಕ : 17–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದುವೆರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:18–05–2009ರಂದು ಟಿ.ನರಸೀಪುರ ತಾಲ್ಲೂಕು, ತಲಕಾಡು ಹಳೇ ಬೀದಿಯ ನವಗ್ರಹ ದೇವಸ್ಥಾನದ ಹತ್ತಿರ, ಮಾಧವ ಮಂತ್ರಿಯ ನಾಲೆಯ ರಸ್ತೆಯ ಬಳಿ ಕೆಎ–09/ಜೆ–8307 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 6.660 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

ಈ ಪ್ರಕರಣ ದಾಖಲಾಗಿ ಈಗಾಗಲೇ ಸುಮಾರು (5) ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಹ ಜಪ್ತಿಯಾದ ವಾಹನವು ತನ್ನದೆಂದಾಗಲೀ, ಈ ಬಗ್ಗೆ ತಾನು ವಿಚಾರಣೆ ನಡೆಸುತ್ತೇನೆ ಎಂದಾಗಲೀ ಯಾರೊಬ್ಬರೂ ಇಂದಿನವರೆವಿಗೂ ಖುದ್ದಾಗಿಯಾಗಲೀ, ಅಥವಾ ತನ್ನ ವಕೀಲರ ಮೂಲಕವಾಗಲೀ ಅರ್ಜಿಯನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿರುವುದಿಲ್ಲ. ವಾಹನ ಮಾಲೀಕರಿಗೆ ಸಾಕಷ್ಟು ದಿನಗಳ ಕಾಲಾವಕಾಶವನ್ನು ನೀಡಿದಾಗಲೂ ಸಹ ಇವರು ಈ ಪ್ರಾಧಿಕಾರದಲ್ಲಿ ತನ್ನ ಹಕ್ಕನ್ನು ಸ್ಥಾಪಿಸದೇ ಇರುವುದರಿಂದ ಸದರಿಯವರು ತನ್ನ ಮೇಲೆ ಹೊರಿಸಿರುವ ಆರೋಪವನ್ನು ಆಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ಅಲ್ಲದೇ ಈ ಘಟನೆಯು ಸಂಭವಿಸಿದ ದಿನದಂದು ವಾಹನವು ಯಾರ ವಶದಲ್ಲಿತ್ತೋ ಅವರಿಗೆ ಅಥವಾ ವಾಹನ ಮಾಲೀಕರಿಗೆ / ಏಜೆಂಟರ್ ಗಮನಕ್ಕೆ ಬಾರದೇ ಮತ್ತು ಅವರುಗಳು ಶಾಮಿಲಾಗದೆ ಹಾಗೂ ಅವರೆಲ್ಲರಿಗೂ ಅರಿವಿಲ್ಲದೇ ಈ ಘಟನೆ ನಡೆದಿದೆ ಎಂಬುದನ್ನು ತೃಪ್ತಿಕರವಾಗಿ ಈ ಪ್ರಾಧಿಕಾರದಲ್ಲಿ ನಿರೂಪಿಸಿಲ್ಲವಾದ್ದರಿಂದ ಸದರಿ ವಾಹನವನ್ನು ಇನ್ನೂ ಹಾಗೇ ಇಟ್ಟುಕೊಂಡಲ್ಲಿ ಯಾವುದೇ ಪ್ರಯೋಜನ ಇರದಿರುವುದನ್ನು ಮನಗಂಡು ಅದನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ : ಡಿಟಿಸಿಆರ್/192 (ಪೋಲೀಸ್)/2008–09, ದಿನಾಂಕ:8ನೇ ಅಕ್ಟೋಬರ್, 2009

ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43 (ಎ) (2)ರನ್ವಯ ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಆರಕ್ಷಕ ಉಪ ನಿರೀಕ್ಷಕರು, ತಲಕಾಡು ಪೋಲೀಸ್ ಠಾಣೆ, ಟಿ.ನರಸೀಪುರ ತಾ॥ ಇವರು ಹೂಡಲಾದ ಪ್ರ.ಮಾ.ವರದಿ ಸಂಖ್ಯೆ: 47/2009, ದಿನಾಂಕ:18–05–09ರಂದು ವಶಪಡಿಸಿಕೊಂಡ ಕೆಎ–09/ಜೆ–8307 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನವನ್ನು (6.660 ಲೀ.ಮದ್ಯವನ್ನು ಮಾದರಿಯನ್ನು ಹೊರತುಪಡಿಸಿ, ಈಗಾಗಲೇ ಪ್ರತ್ಯೇಕ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿದೆ.

(ಈ ಆದೇಶವನ್ನು ಇಂದು ಅಂದರೆ 2009ನೇ ಇಸವಿ ಅಕ್ಟೋಬರ್ ತಿಂಗಳ 08ನೇ ತಾರೀಖಿನಂದು ವಿಷಯ ನಿರ್ವಾಹಕರಿಗೆ ಉಕ್ತಲೇಖನ ನೀಡಿ, ನಂತರ ಗಣಕೀಕೃತಗೊಳಿಸಿ, ತಪ್ಪುಗಳನ್ನು ತಿದ್ದಿ, ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.)

ಡಾ॥ ವೈ.ಮಂಜುನಾಥ್
ಡೆಪ್ಯೂಟಿ ಕಮೀಷನರ್ ಎಕ್ಸೈಸ್ ಹಾಗೂ
ಅಧಿಕೃತ ಅಧಿಕಾರಿಗಳು,
ಮೈಸೂರು ಜಿಲ್ಲೆ, ಮೈಸೂರು.

ಪಿ.ಆರ್.1179

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರ ನ್ಯಾಯಾಲಯ.

ಸಂಖ್ಯೆ: ಡಿಟಿಸಿಆರ್: 190 (ಪೊಲೀಸ್)/2008–09, ದಿನಾಂಕ:8ನೇ ಅಕ್ಟೋಬರ್, 2009

ಉಪಸ್ಥಿತರು: ಡಾ॥ ವೈ.ಮಂಜುನಾಥ್,

ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್ ಹಾಗೂ ಅಧಿಕೃತ ಅಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.

ಫಿರ್ಯಾದುದಾರರು	**ವಿರುದ್ದ**	**ಪ್ರತಿವಾದಿ/ಆರೋಪಿ**
ಆರಕ್ಷಕ ಉಪ ನಿರೀಕ್ಷಕರು ಟಿ.ನರಸೀಪುರ ಪೋಲೀಸ್ ಠಾಣೆ, ಟಿ.ನರಸೀಪುರ.		ಮಹದೇವ ಸ್ವಾಮಿ ಬಿನ್ ಸೋಮಯ್ಯ

ಪ್ರಕರಣದ ಮುಖ್ಯಾಂಶಗಳು:

ದಿನಾಂಕ : 04–04–2009ರಂದು ಮಧ್ಯಾಹ್ನ 12:30 ಗಂಟೆಯ ಸಮಯದಲ್ಲಿ ಆರಕ್ಷಕ ಉಪ ನಿರೀಕ್ಷಕರು, ತಲಕಾಡು ಪೋಲೀಸ್ ಠಾಣೆ ಇವರು ಟಿ.ನರಸೀಪುರ ತಾಲ್ಲೂಕು, ಬೆನಕನಹಳ್ಳಿ ಗೇಟನ ಮುಂಭಾಗವಿರುವ ಬಸ್‌ಸ್ಟಾಪ್ ಬಳಿ ಕೆಎ–10/ಇ–1259 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 5.400 ಲೀ. ಮದ್ಯವನ್ನು ಹೊಂದಿ ಸಾಗಾಣಿಕೆ ಮಾಡುತ್ತಿದ್ದ ಆರೋಪಕ್ಕಾಗಿ ವಾಹನ ಮತ್ತು ಮದ್ಯವ'ನ್ನು ಜಪ್ತುಗೊಳಿಸಿ, ಮಹದೇವಸ್ವಾಮಿ ಬಿನ್ ಸೋಮಯ್ಯ ಎಂಬುವವರನ್ನು ದಸ್ತಗಿರಿ ಮಾಡಿ ಪ್ರಥಮ ಮಾಹಿತಿ ವರದಿ ಸಂಖ್ಯೆ : 83/2009ರಲ್ಲಿ ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 32, 34ರ ರೀತ್ಯಾ ಮೊಕದ್ದಮೆ ದಾಖಲಿಸಿ, ಜಪ್ತುಪಡಿಸಲಾದ ವಾಹನ ಮತ್ತು ಮದ್ಯವನ್ನು ಮುಂದಿನ ಕ್ರಮಕ್ಕಾಗಿ ಅಬಕಾರಿ ಇಲಾಖೆಗೆ ಹಸ್ತಾಂತರಿಸಲು ದಿನಾಂಕ: 04–05–09ರಂದು ಈ ಪ್ರಾಧಿಕಾರಕ್ಕೆ ಅನುಮತಿಗಾಗಿ ಕೋರಿರುತ್ತಾರೆ. ಅಂತೆಯೇ ದಿನಾಂಕ:25.05.2009ರಂದು ಟಿ.ನರಸೀಪುರ ವಲಯ ಅಬಕಾರಿ ನಿರೀಕ್ಷಕರಿಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿರುತ್ತದೆ.

ವಶಪಡಿಸಿಕೊಂಡ ವಾಹನಗಳ ಮಾಲೀಕತ್ವದ ವಿವರವುಳ್ಳ 'ಬಿ' ವಹಿಯನ್ನು ಕೋರಿ, ಚಾಮರಾಜನಗರ ಜಿಲ್ಲೆಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ದಿನಾಂಕ:17–09–2009ರಂದು ಈ ಪ್ರಾಧಿಕಾರದಿಂದ ಪತ್ರ ಬರೆಯಲಾಗಿರುತ್ತದೆ. ಇದುವರೆವಿಗೂ ಯಾವುದೇ ಪ್ರತಿಕ್ರಿಯೆ ಇರುವುದಿಲ್ಲ.

ಲಭ್ಯವಿರುವ ದಾಖಲೆಗಳಂತೆ, ದಿನಾಂಕ:04–04–2009ರಂದು ಟಿ.ನರಸೀಪುರ ತಾಲ್ಲೂಕು, ಬೆನಕನಹಳ್ಳಿ ಗೇಟನ ಮುಂಭಾಗವಿರುವ ಬಸ್‌ಸ್ಟಾಪ್ ಬಳಿ ಕೆಎ–10/ಇ–1259 ನೋಂದಣಿ ಸಂಖ್ಯೆಯ ಟಿವಿಎಸ್ ಎಕ್ಸೆಲ್ ವಾಹನದಲ್ಲಿ ಅಕ್ರಮವಾಗಿ 5.400 ಲೀ. ಮದ್ಯವನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದುದು ಕಂಡುಬಂದಿರುತ್ತದೆ. ಇದನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಕಲಂ 32, 34ರ ಅಡಿಯಲ್ಲಿ ತನಿಖಾಧಿಕಾರಿಗಳು ಆರೋಪ ಮಾಡಿದ್ದು, ಪ್ರತಿವಾದಿಯು ತನ್ನ ಮೇಲೆ ಇರತಕ್ಕಂತಹ ಜವಾಬ್ದಾರಿಯನ್ನು ಇದೂವರೆವಿಗೂ ಈ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸಿರುವುದಿಲ್ಲ. ಆದ ಕಾರಣ ಈ ಕೃತ್ಯವು ವಾಹನ ಮಾಲೀಕನ ತಿಳುವಳಿಕೆಯಲ್ಲೇ ನಡೆದಿದೆ ಎಂಬುವುದು ಈ ಪ್ರಾಧಿಕಾರಕ್ಕೆ ಮನವರಿಕೆಯಾಗಿರುತ್ತದೆ.

